ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಆರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 05ನೇ ಫೆಬ್ರವರಿ, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

2.ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ)

3. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2014
ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2015ರ ಫೆಬ್ರವರಿ 02ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ 02ನೇ ಫೆಬ್ರವರಿ 2015ರಂದು ಶ್ರೀ ಬಸವರಾಜ ರಾಯರೆಡ್ಡಿಯವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

ಪು.ತಿ.ನೋ.,.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಆರ್.ಅಶೋಕ್,ಬಸವರಾಜ ಬೊಮ್ಮಾಯಿ, ಗೋವಿಂದ ಎಂ. ಕಾರಜೋಳ, ಕೆ.ಜಿ.ಬೋಪಯ್ಯ ಹಾಗೂ ಇತರರು ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಿರುವ ಸಣ್ಣ ರೈತರುಗಳನ್ನು ತೆರವುಗೊಳಿಸುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

2. ಶ್ರೀಯುತರುಗಳಾದ ಎಂ.ಕೆ.ಸೋಮಶೇಖರ್, ಟಿ.ವೆಂಕಟರಮಣಯ್ಯ ಮತ್ತು ರುದ್ರಪ್ಪ ಮಾನಪ್ಪ ಲಮಾಣಿ ಅವರುಗಳು ಕರ್ನಾಟಕ ರಾಜ್ಯದ ಪೌರಕಾರ್ಮಿಕರ ದುಸ್ಥಿತಿ ಹಾಗೂ ಅವರ ಮೇಲಿನ ದೌರ್ಜನ್ಯದ ಬಗ್ಗೆ ಚರ್ಚೆ.

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎಸ್.ಎನ್.ಸುಬ್ಬಾರೆಡ್ಡಿ ಅವರು 2014-15ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. ಶ್ರೀ ಎಸ್.ಟಿ.ಸೋಮಶೇಖರ್ ಅವರು ಯಶವಂತಪುರ ವಿಧಾನಸಭಾ ಕ್ಷೇತ್ರದ ರಾಮುಹಳ್ಳಿ, ಚಿಕ್ಕನಹಳ್ಳಿ ಮತ್ತು ಚೋಳನಾಯಕನಹಳ್ಳಿಯ ಗ್ರಾಮ ಪಂಚಾಯತಿ ಪರಿಮಿತಿಯಲ್ಲಿ ನಡೆಯುತ್ತಿರುವ ಕಲ್ಲುಗಣಿಗಾರಿಕೆಯಿಂದ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3. ಶ್ರೀ ಯು.ಬಿ.ಬಣಕಾರ್ ಅವರು ಸರ್ವಜ್ಞ ಕವಿಗೆ ಸಂಬಂಧಿಸಿದ ಅಬಲೂರು, ಮಾಸೂರ ಹಾಗೂ ಇನ್ನಿತರ ಸ್ಥಳಗಳನ್ನು ಪ್ರವಾಸೋದ್ಯಮ ದೃಷ್ಟಿಯಿಂದ ಅಭಿವೃದ್ಧಿ ಪಡಿಸಲು ಸರ್ವಜ್ಞ ಪ್ರಾಧಿಕಾರ ರಚನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಜಿ. ಬೋಪಯ್ಯ ಅವರು ಮೈಸೂರು ಬಂಟ್ವಾಳ ರಸ್ತೆಯಲ್ಲಿ ಭಾರೀ ವಾಹನಗಳ ಸಂಚಾರವನ್ನು ನಿಷೇಧಿಸಿದ್ದರೂ, ಭಾರಿ ವಾಹನಗಳು ಸಂಚರಿಸುತ್ತಿರುವುದರಿಂದ ಸಂಪಾಜೆ ಭಾಗದಲ್ಲಿ ರಸ್ತೆ ಕುಸಿದಿದ್ದು, ಆ ರಸ್ತೆಯನ್ನು ದುರಸ್ತಿಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

5. ಶ್ರೀ ಬಿ.ಬಿ.ನಿಂಗಯ್ಯ ಅವರು ರಾಜ್ಯದಲ್ಲಿ ಬಿಪಿಎಲ್ ಪಡಿತರ ಚೀಟಿ ಹೊಂದಿರುವ ಕುಟುಂಬಗಳಿಗೆ ಉಚಿತವಾಗಿ ಅಡುಗೆ ಅನಿಲ ಸಂಪರ್ಕವನ್ನು ನೀಡುವುದಾಗಿ ಕೇಂದ್ರ ಸರ್ಕಾರ ಪ್ರಕಟಿಸಿದ್ದು, ಈ ಯೋಜನೆಯನ್ನು ಎ.ಪಿ.ಎಲ್ ಪಡಿತರ ಚೀಟಿ ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕುಟುಂಬಗಳಿಗೂ ವಿಸ್ತರಿಸುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

6. ಶ್ರೀ ಎಸ್. ಮಧು ಬಂಗಾರಪ್ಪ ಅವರು ಶಿವಮೊಗ್ಗ ಜಿಲ್ಲೆ ಶಿಕಾರಿಪುರ ತಾಲ್ಲೂಕಿನಲ್ಲಿ ಸಂಡಾ ವಿದ್ಯುತ್ ಗ್ರಿಡ್ ಕಾಮಗಾರಿಯು ವಿಳಂಬವಾಗಿರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

7. ಶ್ರೀ ಎಂ.ಪಿ ಅಪ್ಪಚ್ಚು (ರಂಜನ್) ಅವರು ಕೊಡಗು ಜಿಲ್ಲೆಯಲ್ಲಿ ಕಾಫಿ ಬೆಳೆಗಾರರು ವಿದ್ಯುತ್ ಐ.ಪಿ. ಸೆಟ್‌ಗಳಿಗೆ ಉಪಯೋಗಿಸುವ ವಿದ್ಯುತ್‌ನ ಬಿಲ್ ಮೊತ್ತವನ್ನು ಪಾವತಿಸುವಂತೆ ನೋಟಿಸ್ ಜಾರಿಯಾಗಿರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

8. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ 2015-16ನೇ ಶೈಕ್ಷಣಿಕ ವರ್ಷದಲ್ಲಿ ಸಂಜೆ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಕಾಲೇಜನ್ನು ಆರಂಭಿಸಲು ಸೂಕ್ತ ಕಟ್ಟಡವಿದ್ದು ಬೋಧಕ ಸಿಬ್ಬಂದಿ ವರ್ಗ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುದಾನವನ್ನು ನೀಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

9. ಶ್ರೀ ಕೆ.ಬಿ. ಪ್ರಸನ್ನಕುಮಾರ್ ಅವರು ಶಿವಮೊಗ್ಗ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಮಾಲೀಕತ್ವದಲ್ಲಿರುವ ಒಟ್ಟು 13 ಕೊಳಚೆ ಪ್ರದೇಶಗಳ ನಿವಾಸಿಗಳಿಗೆ ಇದುವರೆವಿಗೂ ಹಕ್ಕುಪತ್ರ ಮತ್ತು ಸ್ವಾಧೀನ ಪತ್ರವನ್ನು ವಿತರಣೆ ಮಾಡದಿರುವ ಬಗ್ಗೆ ವಸತಿ ಸಚಿವರ ಗಮನ ಸೆಳೆಯುವುದು.

10. ಶ್ರೀಯುತರುಗಳಾದ ಹೆಚ್.ಎಸ್.ಪ್ರಕಾಶ್ ಮತ್ತು ಹೆಚ್.ಡಿ.ರೇವಣ್ಣ ಅವರು ರಾಷ್ಟ್ರೀಯ ಹೆದ್ದಾರಿ ಸಂಖ್ಯೆ 75, ಬೆಂಗಳೂರು-ಮಂಗಳೂರು ಬೈಪಾಸ್ ರಸ್ತೆಯ ತಿಪಟೂರು-ದುದ್ದ-ಹಾಸನ (ರಾಜ್ಯ ಹೆದ್ದಾರಿ ಸಂಖ್ಯೆ-71)ನ್ನು ಸಂಪರ್ಕಿಸುವ ರಾಜ್ಯ ಹೆದ್ದಾರಿ ಸಂಖ್ಯೆ71ಇ (ಡೈರಿ ಸರ್ಕಲ್‌ನಿಂದ ಬುತ್ತೇನಹಳ್ಳಿ) ರಸ್ತೆಯ ಸರಪಳಿ 0.00ಕಿ.ಮೀ ದಿಂದ 0.45ರವರೆಗಿನ 4 ಪಥದ ರಸ್ತೆಯಲ್ಲಿ ಅಪಘಾತಗಳಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಅದನ್ನು 6 ಪಥದ ರಸ್ತೆಯನ್ನಾಗಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

7. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಎ.ಎಸ್.ಪಾಟೀಲ್(ನಡಹಳ್ಳಿ) ಅವರು "ಹವಾಮಾನ ವೈಪರಿತ್ಯ ಹಾಗೂ ನಂಜಾಣು ರೋಗದಿಂದ ತೊಗರಿ, ಕಡಲೆ ಹಾಗೂ ಸೂರ್ಯಕಾಂತಿ ಬೆಳೆಗಳು ನಾಶವಾಗಿರುವ" ಬಗ್ಗೆ ದಿನಾಂಕ:03.02.2015ರಂದು ನಿಯಮ 73ರಡಿಯಲ್ಲಿನ ಗಮನ ಸೆಳೆಯುವ ಸೂಚನೆಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm